# ಶಿವಮೊಗ್ಗ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ,

## ಅಧಿಸೂಚನೆ ಸಂಖ್ಯೆ: ADM.DJS. 25776 /2021

### ದಿನಾಂಕ :23 ನೇ ಡಿಸೆಂಬರ್ ಮಾಹೆ 2021.

ವಿಷಯ: ಬೆರಳಚ್ಚು-ನಕಲುಗಾರ ಹುದ್ದೆಗಳ ನೇಮಕಾತಿ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಅಧಿಸೂಚನೆ ಸಂಖ್ಯೆ: ADM.DJS.20474/2018, ದಿನಾಂಕ:12.12.2018.
2. ಮಾನ್ಯ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: LCA II 128/2012 ದಿ: 18.09.2018.
3. G.O.No.LAW 156 LAC 2018 Dated 07.08.2018.
4. ಕರ್ನಾಟಕ ಅಧೀನ ನ್ಯಾಯಾಲಯಗಳ ಲಿಪಿಕ ಮತ್ತು ಇತರ ಹುದ್ದೆಗಳ ನೇಮಕಾತಿ ತಿದ್ದುಪಡಿ ನಿಯಮಗಳು, 2021.
5. ಕರ್ನಾಟಕ ನಾಗರೀಕ ಸೇವಾ (ಶೀಘ್ರಲಿಪಿಗಾರರ ಹಾಗು ಬೆರಳಚ್ಚುಗಾರರ ಹುದ್ದೆಗಳಿಗೆ ನೇಮಕಾತಿ) ನಿಯಮಗಳು, 1983.

**ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ :30.01.2022.**

ಶಿವಮೊಗ್ಗ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಘಟಕದ ವಿವಿಧ ನ್ಯಾಯೂಲಯಗಳಲ್ಲಿ ಕೆಳಗೆ ವಿವರಿಸಿರುವಂತೆ ಖಾಲಿ ಇರುವ ಬೆರಳಚ್ಚು-ನಕಲುಗಾರರ **(TYPIST-COPYIST)** **04** ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ಅರ್ಜಿಗಳನ್ನು ಶಿವಮೊಗ್ಗದ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ **https://districts.ecourts.gov.in/shivamogga-onlinerecruitment** ಅಥವ **http://karnatakajudiciary.kar.nic.in/districtrecruitment.asp** ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ ದಿನಾಂಕ:- **27.12.2021** ರಿಂದ ದಿನಾಂಕ **30.01.2022**ರ ರಾತ್ರಿ 11.59 ರವರೆಗೆ ಮಾತ್ರ ಸಲ್ಲಿಸತಕ್ಕದ್ದು.

**1) ಹುದ್ದೆಗಳ ಸಂಖ್ಯೆ : 04**

ಹುದ್ದೆಗಳ ವರ್ಗೀಕರಣ :

| ವರ್ಗೀಕರಣ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕ | ಒಟ್ಟು |
|---|---|---|---|
| ಸಾ.ಅ | - | 1 | 1 |
| ಪರಿಶಿಷ್ಟ ಜಾತಿ | - | 1 | 1 |
| ಪ್ರವರ್ಗ-1 | 1 | - | 1 |
| ಪ್ರವರ್ಗ 2-ಬಿ | 1 | - | 1 |
| ಒಟ್ಟು | 2 | 2 | 4 |

2) ವೇತನ ಶ್ರೇಣಿ : **21400-500-22400-550-24600-600-27000-650-29600-750-32600-850-36000-950-39800-1100-42000** ಹಾಗೂ ಇತರೆ ಭತ್ಯೆಗಳು.

3) ಶೈಕ್ಷಣಿಕ ವಿದ್ಯಾರ್ಹತೆ :-

1. ಪದವಿಪೂರ್ವ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ ಹಾಗೂ
2. ಸಾರ್ವಜನಿಕ ಶಿಕ್ಷಣ ಇಲಾಖೆಯು ನಡೆಸುವ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಕಿರಿಯ ದರ್ಜೆ ಪರೀಕ್ಷೆಯಲ್ಲಿ ಉತ್ತೀರ್ಣತೆ ಅಥವಾ ತತ್ಸಮಾನ ವಿದ್ಯಾರ್ಹತೆ.

4) ಮೇಲ್ಕಂಡ ಹುದ್ದೆಗಳ ವರ್ಗೀಕರಣವನ್ನು ಈ ಕೆಳಕಂಡ ಸರ್ಕಾರಿ ಆಜ್ಞೆಗಳ ಪ್ರಕಾರ ಮಾಡಲಾಗಿದೆಃ

1. ಸರ್ಕಾರಿ ಆದೇಶ ಸಂಖ್ಯೆ: **DPAR 08 SRS 1995,** ದಿನಾಂಕ **20-6-1995.**
2. ಸರ್ಕಾರಿ ಆದೇಶ ಸಂಖ್ಯೆ: **DPAR 53 SRS 2007,** ದಿನಾಂಕ **4-1-2008.**
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೆನೆನಿ 2001 ದಿನಾಂಕಃ13.02.2001.
4. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 3 ಸೆಹಿಮ 2015 ದಿನಾಂಕಃ03.10.2015.
5. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 34 ಸೆನೆನಿ 95 ದಿನಾಂಕಃ15.07.1996.
6. ಸರ್ಕಾರಿ ಆದೇಶ ಸಂಖ್ಯೆ: **LAW 01 LAC 2005 dated 13.02.2008**
7. ಸರ್ಕಾರಿ ಆದೇಶ ಸಂಖ್ಯೆ: **LAW 166 LAC 2015 dated 06.03.2021**

(5) ವಯೋಮಿತಿಃ

(ಅ) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಕನಿಷ್ಟ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ,

(ಬ) ಗರಿಷ್ಠ ವಯೋಮಿತಿಃ ಸಾಮಾನ್ಯ ವರ್ಗ : 35 ವರ್ಷಗಳು

2ಎ, 2ಬಿ, 3ಎ, 3ಬಿ : 38 ವರ್ಷಗಳು

ಪರಿಶಿಷ್ಟ ಜಾತಿ :ಪರಿಶಿಷ್ಟ ಪಂಗಡ : ಪ್ರವರ್ಗ-1 : 40 ವರ್ಷಗಳು

ವಿಃಸೂಃ ಮಾಜಿ ಸೈನಿಕರಿಗೆ ಗರಿಷ್ಟ ವಯೋಮಿತಿ ಅವನು ಕೇಂದ್ರದ ನಿಯತ ಸೇನೆಯಲ್ಲಿ / ನೌಕಾಪಡೆಯಲ್ಲಿ / ವಾಯುಪಡೆಯಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ ಮೂರು ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳ ಸಡಿಲಿಕೆ ಮತ್ತು ವಿಧವೆಯರಿಗೆ ಮತ್ತು ಅಂಗವಿಕಲರಿಗೆ 10 ವರ್ಷಗಳ ಸಡಿಲಿಕೆ ಹಾಗು ಈಗಾಗಲೆ ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳಿಗೆ ನಿಯಮಾನುಸಾರ ವಯೋಮಿತಿಯಲ್ಲಿ ಸಡಲಿಕೆ ನೀಡಲಾಗುವುದು (ಈ ಬಗ್ಗೆ ಸಡಲಿಕೆ ಕೋರಿದಲ್ಲಿ ಪ್ರಮಾಣಪತ್ರ ಸಲ್ಲಿಸಬೇಕು).

(6) ಅರ್ಜಿ ಸಲ್ಲಿಸುವ ವಿಧಾನ ಃ

ನಿಗದಿತ ಅರ್ಜಿ ಶುಲ್ಕ- ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನಃ

| | |
|---|---|
| ಸಾಮಾನ್ಯ ವರ್ಗಕ್ಕೆ ಸೇರಿದ ಅಭ್ಯರ್ಥಿಗಳು | ರೂ.200-00. |
| ಪ್ರವರ್ಗ-2ಎ, 2ಬಿ ಮತ್ತು 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳು | ರೂ.100-00 |
| ಪರಿಶಿಷ್ಟ ಜಾತಿ ಃ ಪರಿಶಿಷ್ಟ ಪಂಗಡ , ಪ್ರವರ್ಗ-1 ಮತ್ತು ಅಂಗವಿಕಲ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಸುವುದರಿಂದ ವಿನಾಯಿತಿ ನೀಡಲಾಗಿದೆ." | |

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/shivamogga-onlinerecruitment ಅಥವ https://karnatakajudiciary.kar.nic.in/districtrecruitment.asp ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ **online payment through net banking/credit card/debit card/challan download** ಸೌಲಭ್ಯದ ಮೂಲಕ ಪಾವತಿಸತಕ್ಕದ್ದು, ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಛಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ **print out** ಅನ್ನು ಪಡೆದುಕೊಂಡು ಎಸ್.ಬಿ.ಐ. ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು, ಇದನ್ನು ಹೊರತುಪಡಿಸಿ ಯಾವುದೇ ಡಿಮ್ಯಾಂಡ್ ಡ್ರಾಫ್ಟ್ ಃ ಪೋಸ್ಟಲ್ ಆರ್ಡರ್ ಃ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಗಳು **ON-LINE** ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಗಳು ಅರ್ಜಿಯನ್ನು **ON-LINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಗಳು ವಿವಿಧ ವರ್ಗಗಳಿಗೆ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಸದ್ರಿ ಅರ್ಜಿಯಲ್ಲಿಯೇ ತಾವು ಕ್ಲೇಮು ಮಾಡುವ ತಮ್ಮ ಮೀಸಲಾತಿಗಳ ಬಗ್ಗೆ ನಮೂದಿಸತಕ್ಕದ್ದು.

3. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಹಾಗೂ ಇ-ಮೇಲ್ ಐಡಿಯನ್ನು ಕಡ್ಡಾಯವಾಗಿ ನಮೂದಿಸುವುದು. ಒಂದು ವೇಳೆ SMS ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

4. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ x 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ x 7.5 cm ಅಗಲವುಳ್ಳದ್ದಾಗಿರಬೇಕು ಮತ್ತು 26 kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

5. ತದನಂತರ ಅಭ್ಯರ್ಥಿಯು ON - LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು down load ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

6. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

7. ನ್ಯಾಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು : ಸಲ್ಲಿಸಲು ದಿನಾಂಕ: **30.01.2022**ರ ರಾತ್ರಿ 11.59ರವರೆಗೆ ಅವಕಾಶವಿರುತ್ತದೆ.

ಮತ್ತು

ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕ: **31.01.2022** ಕಡೆಯ ದಿನಾಂಕವಾಗಿದ್ದು ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ

ವೇಳೆಯಲ್ಲಿ ಪಾವತಿಸತಕ್ಕದ್ದು.

8. ಅರ್ಹ ಅಭ್ಯರ್ಥಿಗಳಿಗೆ **SMS & E-Mail** ಮುಖಾಂತರ ಮಾಹಿತಿ ನೀಡಲಾಗುವುದು. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು.
9. ಆನ್‌ಲೈನ್ ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
10. ಸೇವಾ ನಿರತ ಅಭ್ಯರ್ಥಿಗಳು ಸಂಬಂಧಪಟ್ಟ ಪ್ರಾಧಿಕಾರದಿಂದ " ನಿರಾಕ್ಷೇಪಣಾ ಪ್ರಮಾಣಪತ್ರ " ವನ್ನು ಸದರಿ ಹುದ್ದೆಗೆ ಆಯ್ಕೆಯಾದ ಪಕ್ಷದಲ್ಲಿ, ಆಯ್ಕೆಪಟ್ಟಿ ಪ್ರಕಟವಾದ 30 ದಿನಗಳೊಳಗಾಗಿ ಪಡೆಯತಕ್ಕದ್ದು.
11. ವಿವಿಧ ಮೀಸಲಾತಿ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು. ಗ್ರಾಮೀಣ ಪ್ರವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
12. ಮೇಲ್ಕಂಡ ಕ್ರಮ ಸಂಖ್ಯೆ 11ರ ಅಡಿಯಲ್ಲಿ ಪ್ರಯೋಜನಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆ ಸಕ್ಷಮ ಪ್ರಾಧಿಕಾರಗಳು ನೀಡಿದ ಸಂಬಂಧಪಟ್ಟ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.
13. ವಿಕಲಚೇತನರು ಃ ಮಾಜಿ ಸೈನಿಕರುಃ ವಿಧವೆಯರು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.
14. ಮಾಜಿ ಸೈನಿಕ ವರ್ಗದ ಅಡಿಯಲ್ಲಿ ಮೀಸಲಾತಿಯನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣಪತ್ರವನ್ನು ಹೊಂದಿರತಕ್ಕದ್ದು.
15. ಅಧಿಸೂಚನೆಯಲ್ಲಿ ತೋರಿಸಿರುವ ಮಾಜಿ ಸೈನಿಕ ಹುದ್ದೆಗಳಿಗೆ ಅಭ್ಯರ್ಥಿಗಳು ಲಭ್ಯವಿಲ್ಲದೇ ಇದ್ದಲ್ಲಿ ನೇರ ಮೀಸಲಾತಿಯಡಿ ಬರುವ ಆಯಾ ಪ್ರವರ್ಗದ ಇತರ ಅಭ್ಯರ್ಥಿಯಿಂದ ಭರ್ತಿ ಮಾಡಲಾಗುವುದು.
16. ಅಭ್ಯರ್ಥಿಗಳು ದಾಖಲೆಗಳ ಪರಿಶೀಲನೆಯ ಸಮಯದಲ್ಲಿ, ಶೈಕ್ಷಣಿಕ ವಿದ್ಯಾರ್ಹತೆ, ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣಪತ್ರ, ದ್ವಿತೀಯ ಪಿ.ಯು.ಸಿ. ಪರೀಕ್ಷೆಯ ಪ್ರಮಾಣಪತ್ರ, ಬೆರಳಚ್ಚು ಪರೀಕ್ಷೆಗಳ ಪ್ರಮಾಣಪತ್ರಗಳು, ಗ್ರಾಮೀಣ ಪ್ರಮಾಣ ಪತ್ರಗಳು, ಜಾತಿ ಪ್ರಮಾಣ ಪತ್ರ, ಮಾಜಿ ಸೈನಿಕ ಬಿಡುಗಡೆ ಪ್ರಮಾಣಪತ್ರ ಇವುಗಳಿಗೆ ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ

ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ, ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹಾ ಗುರಿಯಾಗಬೇಕಾಗುತ್ತದೆ.

17. ಅಭ್ಯರ್ಥಿಯು ನೇಮಕಾತಿ ಸಂಬಂಧದಲ್ಲಿ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

18. ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

19. ಬೆರಳಚ್ಚುನಕಲುಗಾರ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳು ಆಯ್ಕೆಯಾದ ಮೂರು ತಿಂಗಳ ಒಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಸರ್ಕಾರದ ಆದೇಶದ ಪ್ರಕಾರ ಪಾಸು ಮಾಡತಕ್ಕದ್ದು.

20. <u>ಆಯ್ಕೆ ವಿಧಾನ :</u>

ಅಭ್ಯರ್ಥಿಗಳ ಆಯ್ಕೆಯು ಕರ್ನಾಟಕ ಅಧೀನ ನ್ಯಾಯಾಲಯಗಳ (ಲಿಪಿಕ ಮತ್ತು ಇತರೆ ಹುದ್ದೆಗಳ) (ನೇಮಕಾತಿ) ನಿಯಮ 1982 ಮತ್ತು (ತಿದ್ದುಪಡಿ) ನಿಯಮ 2007 ಹಾಗೂ ಕಾಲಕಾಲಕ್ಕೆ ಆದ ತಿದ್ದುಪಡಿ ನಿಯಮಗಳ ಪ್ರಕಾರ.

1. ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ 15 ನಿಮಿಷಗಳ ಉಕ್ತಲೇಖನವನ್ನು ಕಂಪ್ಯೂಟರ್ ಯಂತ್ರಗಳ ಮೂಲಕ ಬೆರಳಚ್ಚುಪಡಿಸತಕ್ಕದ್ದು.
2. ಈ ಪರೀಕ್ಷೆಯು ಗರಿಷ್ಠ 100 ಅಂಕಗಳದ್ದಾಗಿದ್ದು ಪ್ರತಿ ಪರೀಕ್ಷೆಯಲ್ಲೂ ಉತ್ತೀರ್ಣತೆಗೆ ಕನಿಷ್ಠ 50 ಅಂಕಗಳನ್ನು ಅಭ್ಯರ್ಥಿಗಳು ಪಡೆಯಬೇಕಾಗಿರುತ್ತದೆ.
3. ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಶೇಕಡಾವಾರು ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

(ಮುಸ್ತಫ ಹುಸೇನ್ ಎಸ್ ಎ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಶಿವಮೊಗ್ಗ.

ಪ್ರತಿಯನ್ನು ವಿಲೇಖನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಸಲ್ಲಿಸಲಾಗಿದೆ.

ಪ್ರತಿಯನ್ನು :-

(1) ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ಬೆಂಗಳೂರು.

(2) ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ಇವರಿಗೆ.

(3) ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಶಿವಮೊಗ್ಗ.

(4) ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಶಿವಮೊಗ್ಗ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.

(5) ಪ್ರಧಾನ ನಗರ ವ್ಯವಹಾರ ಮತ್ತು ಸೆಷನ್ಸ್ ನ್ಯಾಯಾಧೀಶರು, ಬೆಂಗಳೂರು ನಗರ ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ಬೀದರ, ಚಾಮರಾಜನಗರ, ಚಿಕ್ಕಮಗಳೂರು, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಕ್ಷಿಣಕನ್ನಡ, ದಾವಣಗೆರೆ, ಧಾರವಾಡ, ಗದಗ, ಹಾಸನ, ಹಾವೇರಿ, ಕಲಬುರಗಿ, ಕಾರವಾರ, ಕೊಡಗು, ಕೋಲಾರ, ಕೊಪ್ಪಳ, ಮಂಡ್ಯ ಮೈಸೂರು, ರಾಯಚೂರು, ರಾಮನಗರ, ತುಮಕೂರು, ಉಡುಪಿ, ವಿಜಯಪುರ, ಯಾದಗಿರಿ ಇವರಿಗೆ ಮಾಹಿತಿ ಮತ್ತು ವ್ಯಾಪಕ ಪ್ರಚಾರಕ್ಕಾಗಿ.

(6) ಶಿವಮೊಗ್ಗ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು.